# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 74 /2022-23 ದಿನಾಂಕ : 23-5-2022

ದಿನಾಂಕ: 21-05-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಧನಂಜಯ | ಟಿ.ಐ | 7353149050 |
| 9 | ಜೈ ಪ್ರಕಾಶ್ | Marshal | 9901202183 |
| 10 | ಓ.ಅಂಜಿನೇಯ | Senior health Inspector | |
| 11 | Sharnabasu | P.C. 14639 | 9164932436 |

ದಿನಾಂಕ 21-05-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

Scanned with CamScanner

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ರಾಮಯ್ಯಂಗಾರ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು.

1. ಆರ್.ವಿ.ರಸ್ತೆ SUBCO Bankನ ಮುಂಭಾಗದಲ್ಲಿರುವ Garbage ಮತ್ತು ಡೆಬ್ರೀಸ್‌ನ್ನು ತೆರವುಗೊಳಿಸುವುದು.
2. ಲಾಲ್‌ಬಾಗ್ ವೆಸ್ಟ್‌ಗೇಟ್ ಮುಂಭಾಗದಲ್ಲಿರುವ ಕಸವನ್ನು ತೆರವುಗೊಳಿಸುವುದು,
3. ಹಸಿಕಸಿ ಮತ್ತು ಒಣಕಸವನ್ನು ಬೇರ್ಪಡಿಸಿ (ವಿಂಗಡಿಸಿ) ನೀಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.
4. ಬೀದಿ ಹಸುಗಳನ್ನು ಹಿಡಿಯುವುದು ಮತ್ತು ದಂಡ ಹಾಕುವುದು.
5. ಸಜ್ಜನರಾವ್ ವೃತ್ತದ ಬಳಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ತಡೆಗಟ್ಟುವುದು.
6. ಈಸ್ಟ್ ಸರ್ಕಲ್ ರಸ್ತೆಯ ಎರಡೂ ಬದಿಯಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡುವುದನ್ನು ತಪ್ಪಿಸಲು ಕ್ರಮವಹಿಸುವುದು.
7. ಒಣಗಿದ ಮರದ ಕೊಂಬೆಗಳನ್ನು ತೆರವುಗೊಳೀಸುವುದು.
8. ನ್ಯಾಷನಲ್ ಹೈ ಸ್ಕೂಲ್ ರಸ್ತೆಯಲ್ಲಿ ಸುರಿದಿರುವ ಡೆಬ್ರೀಸ್‌ನ್ನು ತೆಗೆಯುವುದು.

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಚರ್ಚಿಸಿ ಕಿರಿಯ ಆರೋಗ್ಯ ಪರಿವೀಕ್ಷಕರು, ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳು, ವಲಯ ಅರಣ್ಯಾಧಿಕಾರಿಗಳನ್ನು ಸಂಪರ್ಕಿಸಿ ಸದರಿ ವಿಷಯಗಳ ಬಗ್ಗೆ ಸುಕ್ತ ಕ್ರಮವನ್ನು ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ನಂತರದಲ್ಲಿ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಕೆಲವು ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮ ವಹಿಸುವಂತೆ ಕೋರಿದರು. ಅವುಗಳು

1. ಆರ್.ವಿ.ರಸ್ತೆಯ ಟೀಚರ್ಸ್ ಕಾಲೇಜ್ ಬಳಿ ಬಸ್ ಶೆಲ್ಟರ್ ನಿರ್ಮಿಸುವುದು.
2. ಶ್ರೀ.ರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ಹಸುಗಳನ್ನು ಮತ್ತು ಶೆಡ್‌ಅನ್ನು ತೆರವುಗೊಳಿಸುವುದು.
3. ಎಂ.ಎನ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗಕ್ಕೆ ಬೋಲ್ಲ್ಯಾರ್ಡ್ಸ್‌ಗಳನ್ನು ಅಳವಡಿಸುವುದು.
4. ಕೆ.ಆರ್. ರಸ್ತೆಯಲ್ಲಿರುವ ನರ್ಸರಿಯನ್ನು ತೆರವುಗೊಳಿಸುವುದು.

Scanned with CamScanner

5. ಸರ್ವೆಯರ್ ರಸ್ತೆ ಕನ್ಸರ್‌ವೆನ್ಸಿಯಲ್ಲಿರುವ "ನಾನ್‌ವೆಜ್" ಹೋಟೆಲ್ ಮತ್ತು ಹಾರ್ಡ್‌ವೇರ್ ಶಾಪ್ ಒತ್ತುವರಿ ಮಾಡಿರುವ ಜಾಗವನ್ನು ತೆರವುಗೊಳಿಸುವುದು.
6. ನ್ಯಾಷನಲ್ ಕಾಲೇಜ್ ಮೇಲುಸೇತುವ ಕೆಳಗಡೆ ಬೆಳಗಿನ ಜಾವ 3.00 ಘಂಟೆಗೆ ತಿಂಡಿ ಅಂಗಡಿಯನ್ನು ತೆರೆಯುತ್ತಿದ್ದು, ಇದರಿಂದ ಅಕ್ಕಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ.
7. ಕನಕಪುರ ರಸ್ತೆಯಲ್ಲಿ ಬ್ಯಾಹ್ಮಿನ್ಸ್ ಹೋಟೆಲ್‌ನವರು ಪಾದಚಾರಿ ಮಾರ್ಗದಲ್ಲಿ ಟೇಬಲ್ ಹಾಕಿರುವುದನ್ನು ತೆಗೆಯುವುದು.

ಈ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಲಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಮಾರ್ಷಲ್ ಮತ್ತು ವಾರ್ಡ್‌ನ ಅಭಿಯಂತರರಿಗೆ ಸೂಕ್ತ ಕ್ರಮವನ್ನು ಕೈಗೊಳ್ಳುವಂತೆ ಸೂಚಿಸಿದರು.

ಪುನಃ ಶ್ರೀ.ರಾಜು ರವರು ಮಾತನಾಡಿ ಬಸವನಗುಡಿ ಪ್ರದೇಶದ ರಸ್ತೆಗಳಿಗೆ ಡಾಂಬರೀಕರಣ ಮಾಡುವಂತೆ ಮತ್ತು ಮಳೆ ನೀರಿನ ಚರಂಡಿಯನ್ನು ಸ್ವಚ್ಛಗೊಳಿಸುವಂತೆ ಕೋರಿದರು. ಸದರಿ ವಿಷಯದ ಬಗ್ಗೆ ವಾರ್ಡ್‌ನ ಅಭಿಯಂತರರು ಪ್ರಸ್ತಾಪಿಸುತ್ತಾ ಈ ಕಾಮಗಾರಿಗಳಿಗೆ ಈಗಾಗಲೇ ಕಾರ್ಯಾದೇಶ ನೀಡಲಾಗಿದ್ದು ಮಳೆ ನಿಂತ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಸಭೆಗೆ ತಿಳಿಸಿದರು. ಶ್ರೀ.ರಾಜು ರವರು ಮಾತು ಮುಂದುವರೆಸಿ ವಾಣಿ ವಿಲಾಸ ರಸ್ತೆ ಮತ್ತು ಕನಕಪುರಂ ರಸ್ತೆಯು ಸೇರುವ ಸ್ಥಳ ಶೇಷಮಹಲ್ ಸರ್ಕಲ್ ಬಳಿ ಮಳೆಯ ನೀರು ನಿಲ್ಲುತ್ತಿದ್ದುದನ್ನು ಹಿಂದಿನ ಸಭೆಯಲ್ಲಿ ತಿಳಿಸಲಾಗಿತ್ತು, ಇದಕ್ಕೆ ಸ್ಪಂದಿಸಿ ಚರಂಡಿಯಲ್ಲಿ ಶೇಖರಣೆಯಾಗಿದ್ದ ಹೂಳು ಮತ್ತು ಕಸವನ್ನು ತೆರವುಗೊಳಿಸಿ ಸ್ವಚ್ಛ ಮಾಡಿ ನೀರು ಸರಾಗವಾಗಿ ಹರಿಯುವಂತೆ ಮಾಡಿರುವುದನಕ್ಕಿ ಸಭೆಯ ಗಮನಕ್ಕೆ ತಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪುನಃ ಶ್ರೀ. ರಾಜು ರವರು ಮಾತನಾಡುತ್ತಾ ಎಂ.ಎಂ.ವಿ.ರಸ್ತೆಯಲ್ಲಿ ಬೃಹತ್ ಗಾತ್ರದ ಮರದ ದಿಮ್ಮಿಗಳನ್ನು ರಸ್ತೆಯ ಎರಡೂ ಬದಿಯಲ್ಲಿ ಹಾಕಿದ್ದು ಬಹಳ ದಿನಗಳಿಂತೆ ಇರುವುದರಿಂದ ಸದರಿ ದಿಮ್ಮಿಗಳನ್ನು ತೆರವುಗೊಳಿಸಬೇಕೆಂದು ಕೋರಿದರು. ಇದಕ್ಕೆ ಸಂಬಂಧಿಸಿದಂತೆ ವಲಯ ಅರಣ್ಯಾಧಿಕಾರಿಗಳನ್ನು ಕೋರುವುದಾಗಿ ಮಾನ್ಯ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಸಭೆಗೆ ಬಂದಿದ್ದ ಸಾರ್ವಜನಿಕರಾದ ಮಾವಳ್ಳಿಯ ಶ್ರೀಕಾಂತ್ ರವರು ಮಾತನಾಡಿ ಆರ್.ವಿ.ರಸ್ತೆಯಲ್ಲಿನ HDFC ATM ಮುಂಭಾಗ ಹಾಗೂ ಅರಳೀ ಮರದ ಬಳಿ ಕೆಲವರು ಕಸವನ್ನು ತಂದು ಹಾಕುತ್ತಿರುವುದರಿಂದ ತೊಂದರೆಯಾಗುತ್ತಿರುವುದಾಗಿ ಮತ್ತು ಕಸವನ್ನು ಹಾಕುವವರಿಗೆ ದಂಡ ಹಾಕುವಂತೆ ಸಭೆಯ ಗಮನಕ್ಕೆ ತಂದರು. ಈ ವಿಷಯವಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಮಾರ್ಷಲ್ ರವರಿಗೆ ಸೂಚಿಸಿದರು.

Scanned with CamScanner

ನಂತರ ವಿ.ವಿ.ಪುರಂ ಟ್ರಾಫಿಕ್ ಎ.ಎಸ್.ಐ ರವರು ಮಾತನಾಡಿ ಸಜ್ಜನ್‌ರಾವ್ ಸರ್ಕಲ್ ಬಳಿ ತಳ್ಳುವ ಗಾಡಿಗಳನ್ನು ನಿಲ್ಲಿಸಿಕೊಂಡು ವ್ಯಾಪಾರ ಮಾಡುತ್ತಿರುವುದರಿಂದ ಮತ್ತು ಹಸುಗಳನ್ನು ಬೀದಿಯಲ್ಲಿ ಬಿಡುವುದರಿಂದ ವಾಹಾನ ಸಂಚಾರಕ್ಕೆ ಮತ್ತು ಪಾದಚಾರಿಗಳಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು, ಈ ಸಂಬಂಧ ಮಾನ್ಯ ನೋಡಲ್ ಅಧಿಕಾರಿಗಳು ಸೂಕ್ರ ಕ್ರಮ ಕೈಗೊಳ್ಳುವಂತೆ ಹಿರಿಯ ಮತ್ತು ಕರಿಯ ಆರೋಗ್ಯ ಪರಿವೀಕ್ಷಕರುಗಳಿಗೆ ಸೂಚಿಸಿದರು.

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರು ಅನುಮತಿಯೊಂದಿಗೆ ವಾರ್ಡ್ ಅಭಿಯಂತರರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2022-23ನೇ ಸಾಲಿನ ಆಯವ್ಯಯದಲ್ಲಿ ವಾರ್ಡ್ ಸಂಖ್ಯೆ 143 ರಲ್ಲಿನ ಚರಂಡಿ ಹಾಗೂ ಪಾದಚಾರಿ ಮಾರ್ಗಗಳ ದುರಸ್ಥಿಗಾಗಿ ಹಾಗೂ ವಾರ್ಷಿಕ ನಿರ್ವಹಣೆಗಾಗಿ ಮೀಸಲಿಟ್ಟಿರುವ ರೂ. 30.00 ಲಕ್ಷಗಳ ಅನುದಾನಕ್ಕೆ ಅನುಮೋದನೆ ನೀಡುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು. ಈ ವಿಷಯವಾಗಿ ಚರ್ಚಿಸಲಾಗಿ ಸದರಿ ಕಾಮಗಾರಿ ("Name of Work: Annual maintenance and Improvements of footpath and drains in ward 143- 30.00 lakhs") ಸರ್ವಾನುಮತಿದಿಂದ ಸಭೆಯ ಅನುಮೋದನೆ ಪಡೆಯಲಾಯಿತು.

ನಂತರ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ಆಂಜನೇಯುಲು ರವರು ಮಾತನಾಡಿ ಈಸ್ಟ್ ಸರ್ಕಲ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿ ಒಳಚರಂಡಿ ನೀರು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ತಿಳಿಸಿದರು. ಇದಕ್ಕೆ ಸಂಬಂಧಿಸಿದಂತೆ BWSSB ಅಧಿಕಾರಿಗಳನ್ನು ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸುವುದಾಗಿ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ -143 ವಿ. ವಿ.ಪುರಂ | ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 143 ಹಾಗೂ<br>ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |

Scanned with CamScanner